ಕರ್ನಾಟಕ ಸರ್ಕಾರ

ಸಂಖ್ಯೆ: ನಅಇ 146 ಬೆಂರೂಪ್ರಾ 2017

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 23.08.2017

ಸುತ್ತೋಲೆ

ರಾಜ್ಯದ ಯೋಜನಾ ಪ್ರಾಧಿಕಾರಗಳ ಲೆಕ್ಕಪರಿಶೋಧನಾ ವರದಿಯನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ:68(ಸಿ)(4)ರನ್ವಯ ಮತ್ತು ವಾರ್ಷಿಕ ವರದಿಯನ್ನು ಕಲಂ:68(ಡಿ) ರನ್ವಯ ರಾಜ್ಯ ವಿಧಾನ ಮಂಡಲದ ಉಭಯ ಸದನಗಳ ಮುಂದೆ ಮಂಡಿಸಬೇಕಾಗಿರುತ್ತದೆ. ಆದರೆ ಹಲವಾರು ಯೋಜನಾ ಪ್ರಾಧಿಕಾರಗಳು (ಪುರಸಭೆ ಯೋಜನಾ ಪ್ರಾಧಿಕಾರಗಳನ್ನೊಳಗೊಂಡಂತೆ) ಲೆಕ್ಕ ಪರಿಶೋಧನಾ ವರದಿ ಮತ್ತು ವಾರ್ಷಿಕ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವಾಗ ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಸಲ್ಲಿಸದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ ಹಾಗೂ ಈ ಬಗ್ಗೆ ವಿಧಾನ ಸಭೆ ಮತ್ತು ವಿಧಾನ ಪರಿಷತ್ತಿನಿಂದ ಸಹ ಗಮನ ಸೆಳೆಯಲಾಗಿರುತ್ತದೆ.

ಆದ್ದರಿಂದ ರಾಜ್ಯದ ಎಲ್ಲಾ ಯೋಜನಾ ಪ್ರಾಧಿಕಾರಗಳು ಲೆಕ್ಕ ಪರಿಶೋಧನಾ ವರದಿ ಮತ್ತು ವಾರ್ಷಿಕ ವರದಿಯನ್ನು ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಕಡ್ಡಾಯವಾಗಿ ಸರ್ಕಾರಕ್ಕೆ ಸಲ್ಲಿಸುವಂತೆ ಈ ಮೂಲಕ ಸದಸ್ಯ ಕಾರ್ಯದರ್ಶಿ / ಮುಖ್ಯಾಧಿಕಾರಿಗಳಿಗೆ ಸೂಚಿಸಿದೆ.

(ನಾಗರಾಜ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಬೆಂಗಳೂರು – ಸದರಿ ಸುತ್ತೋಲೆಯನ್ನು ಕರ್ನಾಟಕ ರಾಜ್ಯ ಪತ್ರ ವಿಶೇಷ ಪತ್ರದಲ್ಲಿ ಪ್ರಕಟಿಸಿ, ಪ್ರಕಟಿತ 50 ಪ್ರತಿಗಳನ್ನು ನಗರಾಭಿವೃದ್ಧಿ ಇಲಾಖೆ (ಅಭಿವೃದ್ಧಿ ಪ್ರಾಧಿಕಾರ ಶಾಖೆ) ಗೆ ಹಾಗೂ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು ಇವರಿಗೆ 50 ಪ್ರತಿಗಳನ್ನು ಒದಗಿಸಲು ಕೋರಿದೆ.

ಪ್ರತಿಯನ್ನು:

1) ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು.
2) ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು.
3) ರಾಜ್ಯದ ಎಲ್ಲಾ ಯೋಜನಾ ಪ್ರಾಧಿಕಾರಗಳ ಸದಸ್ಯ ಕಾರ್ಯದರ್ಶಿ / ಮುಖ್ಯಾಧಿಕಾರಿಗಳಿಗೆ
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.